# 102 ಲಕ್ಷ ಕೋಟಿ ರೂ. ಚಿಕಿತ್ಸೆ

## ವಿತ್ತ ಸಚಿವೆ ನಿರ್ಮಲಾರಿಂದ ಭರಪೂರ ಪ್ಯಾಕೇಜ್ ಘೋಷಣೆ

ನವದೆಹಲಿ: ಮಂಕಾಗಿರುವ ದೇಶೀಯ ಆರ್ಥಿಕತೆಗೆ ಶಕ್ತಿ ತುಂಬಲು ಹಾಗೂ 2025ರ ವೇಳೆಗೆ ಭಾರತವನ್ನು 5 ಶತಕೋಟಿ ಡಾಲರ್ ಆರ್ಥಿಕತೆಯ ದೇಶವನ್ನಾಗಿ ಮಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ, ದೇಶದ ಮೂಲ ಸೌಕರ್ಯ ಯೋಜನೆಗೆ ಭರಪೂರ 102 ಲಕ್ಷ ಕೋಟಿ ರೂ. ಮೌಲ್ಯದ ಯೋಜನೆಗಳನ್ನು ಪ್ರಕಟಿಸಿದೆ.

ನವದೆಹಲಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, "2019ರ ಸ್ವಾತಂತ್ರ್ಯ ದಿನದಂದೇ ಪ್ರಧಾನಿ ನರೇಂದ್ರ ಮೋದಿ, ಮೂಲ ಸೌಕರ್ಯ ವಲಯಕ್ಕೆ 100 ಕೋಟಿ ರೂ.ಗಳ ಯೋಜನೆಗಳನ್ನು ನೀಡುವುದಾಗಿ ಘೋಷಿಸಿದ್ದರು. ವಲಯವಾರು ಯೋಜನೆಗಳನ್ನು ಗುರುತಿಸಲು ಕಾರ್ಯಪಡೆಯನ್ನು ನೇಮಿಸಲಾಗಿತ್ತು. ಈ ಕಾರ್ಯಪಡೆಯು ಮೂಲಸೌಕರ್ಯ ವಲಯದ 70 ಸಹಭಾಗಿ ಸಂಸ್ಥೆಗಳಿಂದ ಅಭಿಪ್ರಾಯ ಸಂಗ್ರಹಿಸಿ, 102 ಲಕ್ಷ ಕೋಟಿ ರೂ.ಗಳ ಯೋಜನೆಯನ್ನು ಪಟ್ಟಿ ಮಾಡಿ ನೀಡಿದ್ದು, ಆ ಯೋಜನೆಗಳನ್ನು ಒಂದರ ಹಿಂದೊಂದರಂತೆ(ಪೈಪ್‌ಲೈನ್ ಮಾದರಿ) ಜಾರಿಗೊಳಿಸಲಾಗುತ್ತದೆ. ರಾಷ್ಟ್ರೀಯ ಮೂಲಸೌಕರ್ಯ ಯೋಜನೆಗಳ (ಎನ್‌ಐಪಿ) ಅಡಿಯಲ್ಲಿ ಮುಂದಿನ ಐದು ವರ್ಷಗಳಲ್ಲಿ ಈ ಯೋಜನೆಗಳನ್ನು ಸಂಪೂರ್ಣವಾಗಿ ಜಾರಿಗೆ ತರಲಾಗುವುದು. ಕಳೆದ ಆರು ವರ್ಷಗಳಿಂದ ಎನ್‌ಐಪಿ ಅಡಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಿಗೂ ಈ ಪ್ಯಾಕೇಜ್ ಅನ್ವಯವಾಗಲಿದೆ ಎಂದು ಅವರು ವಿವರಿಸಿದರು.

**ಒಟ್ಟು 105 ಲಕ್ಷ ಕೋಟಿ ರೂ. ಪ್ಯಾಕೇಜ್?** ಮುಂಬರುವ ದಿನಗಳಲ್ಲಿ ಇದಕ್ಕೆ 3 ಲಕ್ಷ ಕೋಟಿ ರೂ.ಗಳ ಯೋಜನೆಗಳನ್ನು ಹೆಚ್ಚುವರಿಯಾಗಿ ಸೇರ್ಪಡೆ ಮಾಡುವ ಆಲೋಚನೆಯೂ ಇದೆ" ಎಂದರು. ಜೊತೆಗೆ, ಈ ಆರ್ಥಿಕ ಪ್ಯಾಕೇಜ್‌ನಿಂದ ಉದ್ಯೋಗ ಸೃಷ್ಟಿ, ಉತ್ತಮ ಸೌಕರ್ಯ, ಜೀವನ ನಿರ್ವಹಣೆಯಲ್ಲಿ ಮತ್ತಷ್ಟು ಸುಧಾರಣೆಯ ಜೊತೆಗೆ 'ಮೂಲಸೌಕರ್ಯ ವಲಯದ ಅಭಿವೃದ್ಧಿ'ಗೆ ತನ್ನದೇ ಆದ ಕಾಣಿಕೆ ನೀಡಲಿದೆ' ಎಂದು ಆಶಿಸಿದರು.

**ಕೇಂದ್ರ-ರಾಜ್ಯ-ಖಾಸಗಿ ಸಹಭಾಗಿತ್ವ:** ಈ ಯೋಜನೆಯಡಿ ಅನುಷ್ಠಾನಗೊಳ್ಳುವ ಎಲ್ಲಾ ಯೋಜನೆಗಳಲ್ಲೂ ಶೇ. 39ರಷ್ಟು ಕೇಂದ್ರದ ಪಾಲು ಇದ್ದರೆ, ಸಂಬಂಧಪಟ್ಟ ರಾಜ್ಯ ಸರ್ಕಾರಗಳ ಪಾಲು ಕೂಡ ಶೇ. 39ರಷ್ಟಿರಲಿದೆ. ಇನ್ನು, ಶೇ. 22ರಷ್ಟು ಪಾಲನ್ನು ಖಾಸಗಿ ವಲಯದಿಂದ ಪಡೆದುಕೊಳ್ಳಲು ತೀರ್ಮಾನಿಸಲಾಗಿದ್ದು, 2025ರವರೆಗೆ ಖಾಸಗಿ ಸಹಭಾಗಿತ್ವದ ಪಾಲನ್ನು ಶೇ. 30ಕ್ಕೆ ಹೆಚ್ಚಿಸುವ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದರು.

**ವಿದ್ಯುತ್ ನಷ್ಟ ತಪ್ಪಿಸಲು 2.5 ಲಕ್ಷ ಕೋಟಿ ರೂ. ಹೂಡಿಕೆ!** ನಷ್ಟದಲ್ಲಿರುವ ಭಾರತೀಯ ವಿದ್ಯುತ್ ಮಾರಾಟಗಾರರಿಗೆ ಮರುಜೀವ ನೀಡಲು, ಕೇಂದ್ರ ಸರ್ಕಾರ ಬೃಹತ್ ಯೋಜನೆಯೊಂದನ್ನು ರೂಪಿಸಿದೆ. ಮುಂದಿನ ಐದುವರ್ಷಗಳಲ್ಲಿ 2.50 ಲಕ್ಷ ಕೋಟಿ ರೂ.ಗಳನ್ನು ಹೂಡಿಕೆ ಮಾಡಲಿದೆ. ದೇಶಾದ್ಯಂತ ಇರುವ ವಿದ್ಯುತ್ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿ ಹುಡುಕಲಿದೆ.

ಮೂಲಭೂತ ಸೌಕರ್ಯಗಳನ್ನು ವೃದ್ಧಿಸುವುದು ಹಾಗೂ ತಾಂತ್ರಿಕ ಉನ್ನತೀಕರಣ ಮಾಡುವುದು ಈ ಖರ್ಚಿನ ವ್ಯಾಪ್ತಿಯಲ್ಲಿ ಬರುತ್ತದೆ. ಇದರ ಮೂಲಕ ವ್ಯಾಪಾರಿ ಸಂಸ್ಥೆಗಳನ್ನು ಸಶಕ್ತಗೊಳಿಸಿ, ಅವುಗಳಿಗೆ ಸದ್ಯ ಆಗುತ್ತಿರುವ ನಷ್ಟ ತಪ್ಪಿಸಬೇಕೆಂದು ಯೋಜಿಸಿದೆ. ಇದಕ್ಕಾಗಿ ರಾಜ್ಯಸರ್ಕಾರಗಳಿಗೆ 1 ಲಕ್ಷ ಕೋಟಿ ರೂ. ಹಣವನ್ನು ಕೇಂದ್ರ ನೀಡಲಿದೆ.



- ಮೂಲಸೌಕರ್ಯ ಕ್ಷೇತ್ರಕ್ಕೆ ಭರಪೂರ ಆರ್ಥಿಕ ಪ್ಯಾಕೇಜ್ ಘೋಷಣೆ
- ರಾಷ್ಟ್ರೀಯ ಮೂಲಸೌಕರ್ಯ ಯೋಜನೆಗಳ ಮುಂದಿನ ಐದು ವರ್ಷದಲ್ಲಿ ಅನುಷ್ಠಾನಗೊಳ್ಳಲಿರುವ ಯೋಜನೆಗಳು
- ಆರು ವರ್ಷಗಳಿಂದ ಕೇಂದ್ರ, ರಾಜ್ಯಗಳ ಸಹಭಾಗಿತ್ವದಲ್ಲಿ ಅನುಷ್ಠಾನ ಹಂತದಲ್ಲಿರುವ ಯೋಜನೆಗಳಿಗೂ ಪ್ಯಾಕೇಜ್ ಅನ್ವಯ
- ಎಲ್ಲಾ ಯೋಜನೆಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾಲು ಶೇ. 39ರಷ್ಟು

| ವಲಯ | ಪ್ಯಾಕೇಜ್ (ಲಕ್ಷ ಕೋಟಿ ರೂ.) |
|---|---|
| ಎಕ್ಸ್‌ಪ್ರೆಸ್ ಹೈವೇ, ರಾಷ್ಟ್ರೀಯ ಅನಿಲ ಜಾಲ ಇತ್ಯಾದಿ | 42 |
| ಇಂಧನ | 24.54 |
| ರಸ್ತೆ ಯೋಜನೆಗಳು | 19.63 |
| ನಗರ ಮೂಲ ಸೌಕರ್ಯ | 16.29 |
| ರೈಲ್ವೆ ಯೋಜನೆಗಳು | 13.68 |
| ಕೃಷಿ | 7.7 |
| ಗ್ರಾಮೀಣ ಮೂಲ ಸೌಕರ್ಯ | 7.7 |
| ಕೈಗಾರಿಕಾ ಮೂಲ ಸೌಕರ್ಯ | 3.07 |
| ದೂರಸಂಪರ್ಕ | 3.2 |
| ಬಂದರು ಯೋಜನೆ | 01 |
| ವಿಮಾನ ನಿಲ್ದಾಣ | 1.43 |
| ವಿದ್ಯುತ್ | 11.7 |
| ಡಿಜಿಟಲ್ ಮೂಲಸೌಕರ್ಯ | 3.2 |